**ಸಾಕ್ಷಿಗೆ ದಿನಾಂಕಃ19-03-2026 ರಂದು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**:: ಪಾಟೀ ಸವಾಲು :: ವಾದಿ ಪರ ಶ್ರೀ. DCP ವಕೀಲರಿಂದ ::**

ನಾನು ಪಿಯುಸಿ ವರೆಗೂ ವಿದ್ಯಾಭ್ಯಾಸ ಮಾಡಿರುತ್ತೇನೆ. 2 ರಿಂದ 4 ನೇ ಪ್ರತಿವಾದಿಗಳು ನಮ್ಮ ಬೀದಿಯವರಾಗಿದ್ದು ಅವರು ನಮ್ಮ ಸಂಬಂಧಿಕರಾಗಿರುವುದಿಲ್ಲ. ಸದರಿ ಪ್ರತಿವಾದಿಗಳಿಗಂದ ನಾನು ಈ ದಾವೆಯಲ್ಲಿ ಯಾವುದೇ ಅಧಿಕಾರ ಪತ್ರ ಪಡೆದಿರುವುದಿಲ್ಲ. ನನ್ನ ಸ್ವಂತ ಊರು ಉಡುಪಿ ಜಿಲ್ಲೆಯ ಬೈಂದೂರು ಆಗಿರುತ್ತದೆ. ನನ್ನ ಹೆಂಡತಿಯ ಊರು ಬಾವಿಕೆರೆ ಆಗಿದ್ದು ನನ್ನ ಮದುವೆ ನಂತರ ನಾನು ಬಾವಿಕೆರೆಯಲ್ಲಿ ವಾಸವಾಗಿರುತ್ತೇನೆ. ನನ್ನ ಹೆಂಡತಿ ಹಿಂದೆ ಬಾವಿಕೆರೆ ಗ್ರಾ ಪಂ ಅಧ್ಯಕ್ಷರಾಗಿದ್ದರು ಎಂದರೆ ಸರಿ. ದಾವಾ ಶೆಡ್ಯೂಲ್ ಸ್ವತ್ತನ್ನು ನನ್ನ ಹೆಂಡತಿ ಗ್ರಾ ಪಂ ಅಧ್ಯಕ್ಷರಾಗಿದ್ದಾಗ ವಾದಿಗೆ ಮಂಜೂರಿ ಮಾಡಲಾಗಿರುತ್ತದೆ ಎಂದರೆ ಸರಿಯಲ್ಲ. ದಾವೆಯಲ್ಲಿ ನಾವು ತಕರಾರನ್ನು ವಾದಿಯ ದಾವಾ ಶೆಡ್ಯೂಲ್ ಸ್ವತ್ತಿನ ಸ್ವಾಧೀನವನ್ನು ಬಿಡಿಸಿಕೊಡಲು ಕೋರಿ ಹೂಡಿರುತ್ತೇವೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ವಾದಿಯು ದಾವಾ ಶೆಡ್ಯೂಲ್ ಸ್ವತ್ತಿನ ಸ್ವಾಧೀನದಲ್ಲಿ ಇರುವುದಿಲ್ಲ ಎಂದು ನುಡಿದಿರುತ್ತಾರೆ. ನಿಡಿ 9 ಇ ಸ್ವತ್ತು ನನ್ನ ಜಾಗಕ್ಕೆ ಸಂಬಂಧಪಟ್ಟಿದ್ದಾಗಿರುವುದಿಲ್ಲ ಎಂದರೆ ಸರಿ. ದಾವಾ ಶೆಡ್ಯೂಲ್ ಸ್ವತ್ತಿನ ಪಶ್ಚಿಮಕ್ಕೆ ನಿಡಿ9 ರಲ್ಲಿ ಇರುವ ಸ್ವತ್ತು ಇರುತ್ತದೆ. ನಾನು ಬಾಡಿಗೆಗೆ ಇರುವ ಮನೆಯು ಸಾಕಮ್ಮರವರದ್ದಾಗಿರುತ್ತದೆ. ನಾನು ವಾಸ ಇರುವ ಮನೆಯು ದಾವಾ ಶೆಡ್ಯೂಲ್ ಸ್ವತ್ತಿನ ಯಾವ ದಿಕ್ಕಿನಲ್ಲೂ ಇರುವುದಿಲ್ಲ. ನನಗೆ ಕನ್ನಡ ಓದಲು ಮತ್ತು ಬರೆಯಲು ಬರುತ್ತದೆ. ನಿಡಿ6 ಪ್ರಕಾರ ಪಂಚಾಯಿತಿಯವರು ದಾವಾ ಶೆಡ್ಯೂಲ್ ಸ್ವತ್ತಿನ ಖಾತೆಯು ವಾದಿಯ ಹೆಸರಿನಲ್ಲಿ ಇರುತ್ತದೆ ಎಂದು ಹಿಂಬರಹ ನೀಡಿರುತ್ತಾರೆ ಎಂದರೆ ಸರಿ. ಅದೇ ರೀತಿ ನಿಡಿ7 ರ ಪ್ರಕಾರ ಸಹ ದಾವಾ ಶೆಡ್ಯೂಲ್ ಸ್ವತ್ತಿನ assessment ನಮೂದು ಸಹ ವಾದಿಯ ಹೆಸರಿನಲ್ಲಿ ಇರುತ್ತದೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಅದನ್ನು ಅವರು ಸುಳ್ಳಾಗಿ ಮಾಡಿಸಿಕೊಂಡಿರುತ್ತಾರೆ ಎಂದು ನುಡಿಯುತ್ತಾರೆ.

ದಾವಾ ಶೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ಎಲ್ಲಾ ಪಂಚಾಯಿತಿ ದಾಖಲೆಗಳು ವಾದಿಯ ಹೆಸರಿನಲ್ಲಿ ಇರುತ್ತದೆ ಎಂದರೆ ಸರಿಯಲ್ಲ. ನಿಡಿ 1 ರಲ್ಲಿ ಕಂಡು ಬರುವ ಶೀಟ್ ಮನೆಯು ದಾವಾ ಶೆಡ್ಯೂಲ್ ಸ್ವತ್ತು ಆಗಿರುತ್ತದೆ ಎಂದರೆ ಸರಿಯಲ್ಲ. ಸದರಿ ಶೀಟ್ ಮನೆ

ವಾದಿಯದ್ದಾಗಿದ್ದರು ದುರುದ್ದೇಶದಿಂದ ಇಲ್ಲ ಎಂದು ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ದಾವಾ ಶೆಡ್ಯೂಲ್ ಸ್ವತ್ತು ವಾದಿಗೆ ಇಂದಿರಾ ಅವಾಜ್ ಯೋಜನೆಯಡಿ ಮಂಜೂರಾಗಿದ್ದು ಅಲ್ಲಿ ಅವರು ಶೀಟ್ ಮನೆ ನಿರ್ಮಾಣ ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ದಾವಾ ಶೆಡ್ಯೂಲ್ ಸ್ವತ್ತಿನ ವಾದಿಯ ಸ್ವಾಧೀನಕ್ಕೆ ನಾನು ಹಾಗೂ ಇತರೇ ಪ್ರತಿವಾದಿಗಳು 22.07.2020 ರಂದು ತೊಂದರೆ ನೀಡಿರುತ್ತೇವೆ ಎಂದರೆ ಸರಿಯಲ್ಲ. ವಾದಿಯ ನಮ್ಮ ವಿರುದ್ದ ಪೊಲೀಸ್ ದೂರನ್ನು ನೀಡಿರುತ್ತಾರೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಸದರಿ ದೂರು ಸುಳ್ಳು ದೂರು ಆಗಿರುತ್ತದೆ ಎಂದು ನುಡಿಯುತ್ತಾರೆ. ಸಾರ್ವಜನಿಕ ಬಾವಿಗೂ ಹಾಗೂ ದಾವಾ ಶೆಡ್ಯೂಲ್ ಸ್ವತ್ತಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿ. ವಾದಿಗೆ ರಾಜೀವ್ ಗಾಂಧಿ ಹೌಸಿಂಗ್ ಕಾರ್ಪೋರೇಷನ್ ಇಲಾಖೆಯಿಂದ ಮನೆ ನಿರ್ಮಾಣ ಮಾಡಲು ಪಂಚಾಯಿತಿ ಮುಖಾಂತರ ಹಣ ದೊರಕಿರುತ್ತದೆ ಎಂದರೆ ಸರಿ. ಸಾರ್ವಜನಿಕರು ವಾದಿಯು ಸರ್ಕಾರಿ ಬಾವಿ ಉಪಯೋಗಕ್ಕೆ ತೊಂದರೆ ನೀಡುತ್ತಿರುವ ಬಗ್ಗೆ ಸಂಬಂಧಪಟ್ಟ ಇಲಾಖೆಗೆ ದೂರು ನೀಡಿರುತ್ತಾರೆ. ಅದಕ್ಕೆ ಸಂಬಂಧಪಟ್ಟಂತೆ ದಾಖಲಾತಿಗಳನ್ನು ನನ್ನ ವಕೀಲರಿಗೆ ನೀಡಿರುತ್ತೇನೆ. ಆ ರೀತಿ ದೂರನ್ನು ಯಾವ ದಿನಾಂಕ ನೀಡಿರುತ್ತೇನೆ ಎಂದು ನನಗೆ ಈಗ ನೆನಪಿಲ್ಲ. ದಾವಾ ಶೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ವಾದಿಯೇ ಕಂದಾಯ ಪಾವತಿ ಮಾಡುತ್ತಾ ಬಂದಿರುತ್ತಾರೆ ಎಂದರೆ ಇರಬಹುದು. ನಾನು ಹೇಳುತ್ತಿರುವಂ ಸರ್ಕಾರಿ ಬಾವಿಯ assessment ನಂಬರ್ 680 ಆಗಿರುತ್ತದೆ. ಸದರಿ ಜಾಗಕ್ಕೆ ಸಂಬಂಧಪಟ್ಟಂತೆ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ.

ವಾದಿ ದಾವಾ ಶೆಡ್ಯೂಲ್ ಸ್ವತ್ತಿನಲ್ಲಿ ಮನೆ ನಿರ್ಮಾಣ ಮಾಡಿಕೊಂಡು ಸುಮಾರು 30 ವರ್ಷಗಳಿಂದ ಸ್ವಾಧೀನದಲ್ಲಿ ಇರುತ್ತಾರೆ ಎಂದರೆ ಸರಿಯಲ್ಲ. ವಾದಿಯ ಸ್ವತ್ತನ್ನು ಲಪಟಾಯಿಸುವ ಉದ್ದೇಶದಿಂದ ಸುಳ್ಳು ಪ್ರಮಾಣಪತ್ರವನ್ನು ಸಲ್ಲಿಸಿ ಅದಕ್ಕೆ ಪೂರಕವಾಗಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ನಮ್ಮ ಗ್ರಾಮಸ್ದರು ಈ ದಾವೆಯಲ್ಲಿ ಸಾಕ್ಷಿಯನ್ನಾಗಿ ಮಾಡಲು ನನಗೆ ಯಾವುದೇ ತೊಂದರೆ ಇರುವುದಿಲ್ಲ. ಯಾವ ಸಾರ್ವಜನಿಕರಿಗೆ ತೊಂದರೆ ಆಗಿರುತ್ತದೆ ಎಂದು ನನಗೆ ಈಗ ಹೇಳಲು ಆಗುವುದಿಲ್ಲ. ಸುಳ್ಳು ಕತೆಕಟ್ಟಿ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಸಾಕಮ್ಮ ರವರು ಅವರ ಜಾಗವನ್ನು ಮರಿಯಪ್ಪ ಎನ್ನುವವರಿಂದ ಖರೀದಿ ಮಾಡಿರುತ್ತಾರೆ. ಸದರಿ ಖರೀದಿಗೆ ಸಂಬಂಧಪಟ್ಟಂತೆ ಎಸ್ ಆರ್ ನಂಬರ್ ನನಗೆ ಗೊತ್ತಿಲ್ಲ. ಇವತ್ತಿನವರೆಗೂ ವಾದಿಯ ದಾವಾ ಶೆಡ್ಯೂಲ್ ಸ್ವತ್ತಿನ ಸ್ವಾಧೀನದಲ್ಲಿ ಇದ್ದರೂ ಸಹ ದುರುದ್ದೇಶದಿಂದ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ದಾವಾ ಶೆಡ್ಯೂಲ್ ಸ್ವತ್ತಿನ ಚೆಕ್ಕುಬಂದಿ ನನಗೆ ಗೊತ್ತಿಲ್ಲ. ದಾವಾ ಶೆಡ್ಯೂಲ್ ಸ್ವತ್ತಿನಲ್ಲಿ ತೋರಿಸಿರುವ ಚೆಕ್ಕುಬಂದಿ ಜಾಗದಲ್ಲಿ ವಾದಿ ಸ್ವಾಧೀನದಲ್ಲಿ ಇರುತ್ತಾರೆ ಎಂದರೆ ಸರಿಯಲ್ಲ.

**:: ಮರು ವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

sd/-

ಪ್ರಧಾನ ಸಿ.ಜೆ ಮತ್ತು ಜೆ.ಎಂ.ಎಫ್.ಸಿ

ತರೀಕೆರೆ.

ಸಾಕ್ಷಿಯ ಸಹಿ: